ಯಲ್ಲಾಪುರ ಪಟ್ಟಣಕ್ಕೆ ಬೈಪಾಸ್ ರಸ್ತೆ

1023 (1190) ಶ್ರೀ ಪಾಟೀಲ್ ಎ.ಎಸ್. (ಯಲ್ಲಾಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಲ್ಲಾಪುರ ಪ್ಟಣದಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ ರಸ್ತೆಯನ್ನು, ಪಟ್ಟಣದಲ್ಲಿ ಬೈಪಾಸ್ ರಸ್ತೆ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಪ್ರಸ್ತುತ ಯಲ್ಲಾಪುರ ಪಟ್ಟಣಕ್ಕೆ ಬೈಪಾಸ್ ರಸ್ತೆ ನಿರ್ಮಾಣದ ಪ್ರಸ್ತಾವನೆ ಇರುವುದಿಲ್ಲ. ಈ ರಾಷ್ಟ್ರೀಯ ಹೆದ್ದಾರಿ–63ರ ಹೊಸಪೇಟೆಯಿಂದ ಅಂಕೋಲ ಭಾಗದ ರಸ್ತೆಯ ಭುಜಗಳ ಅಗಲೀಕರಣ ಒಳಗೊಂಡಂತೆ 2 ಪಥದ ರಸ್ತೆ ಅಭಿವೃದ್ಧಿ (Widening with Paved Shoulder) ಕಾಮಗಾರಿಯ ಪ್ರಸ್ತಾವನೆಯು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ NHDP-IVB ಯೋಜನೆ ಅಡಿಯಲ್ಲಿ ಸೇರಿರುತ್ತದೆ. ಈ ಯೋಜನೆಯ ಕಾರ್ಯ ಸಾಧ್ಯತೆ ಅಭ್ಯಾಸ ಸಮಯದಲ್ಲಿ (Feasibility Study) ಯಲ್ಲಾಪುರ ಪಟ್ಟಣಕ್ಕೆ ಬೈಪಾಸ್ ನಿರ್ಮಿಸುವ ಬಗ್ಗೆ ಪರಿಗಣಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವನ್ನು ಕೋರಲಾಗಿದೆ.

ಪ್ರವಾಸಿ ಮಂದಿರ ನಿರ್ಮಾಣ

1024 (626) ಶ್ರೀ ಪಾಟೀಲ್ ಎ.ಎಸ್. (ನಡಹಳ್ಳಿ) ದೇವರ ಹಿಪ್ಪರಗಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2008–09 ಮತ್ತು 2009–10ನೇ ಸಾಲಿನಲ್ಲಿ ಬಿಜಾಪುರ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ವಿವಿಧ ಲೆಕ್ಕ ಶೀರ್ಷಿಕೆ ಮತ್ತು ವಿವಿಧ ಯೋಜನೆಯಡಿಯಲ್ಲಿ ಮಂಜೂರಾದ ಕಾಮಗಾರಿ ಮತ್ತು ಅನುದಾನ ಎಷ್ಟು?